ವೀರಶೈವ-ಲಿಂಗಾಯತ ಎರಡೂ ಒಂದೇ

ತುಮಕೂರು: ವೀರಶೈವ ಮತ್ತು ಲಿಂಗಾಯತ ಎರಡೂ ಪದದ ಅರ್ಥ ಒಂದೇಯಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ಲಿಂಗಾಯತ ಎಂಬ ಪದ ಬಳಸುತ್ತಾರೆ ಮತ್ತು ನಗರ ಪ್ರದೇಶದ ವಿದ್ಯಾವಂತರು ವೀರಶೈವ ಎಂಬ ಪದ ಬಳಸುತ್ತಿರುವುದಾಗಿ ತುಮಕೂರು ಸಿದ್ದಗಂಗಾ ಮಠದ ಪೀಠಾಧೀಶ ಶಿವಕುಮಾರ ಸ್ವಾಮೀಜಿ ಅವರು ಮಂಗಳವಾರ ಸ್ಪಷ್ಟನೆ ನೀಡಿದ್ದಾರೆ.

ಲಿಂಗಾಯುತ ಪ್ರತ್ಯೇಕ ಧರ್ಮದ ಕುರಿತಂತೆ ಸಿದ್ದಗಂಗಾ ಶ್ರೀಗಳು ಸಹಮತ ಸೂಚಿಸಿದ್ದಾರೆ ಎಂಬ ಜಲಸಂಪನ್ಮೂಲ ಸಚಿವ ಎಂಬಿ ಪಾಟೀಲ್ ಅವರ ಹೇಳಿಕೆ ಸಾಕಷ್ಟು ವಿವಾದಕ್ಕೆ ಗ್ರಾಸವಾದ ಹಿನ್ನೆಲೆಯಲ್ಲಿ ಸ್ವತಃ ಸಿದ್ಧಗಂಗಾಶ್ರೀಗಳೇ ಇಂದು ಮಾಧ್ಯಮ ಪ್ರಕಟಣೆ ನೀಡಿದ್ದು, ದಿನಾಂಕ 10-9-2017ರಂದು ಕರ್ನಾಟಕ ರಾಜ್ಯದ ಜಲಸಂಪನ್ಮೂಲ ಸಚಿವರಾದ ಎಂ.ಬಿ.ಪಾಟೀಲ್ ರವರು ಶ್ರೀ ಸಿದ್ಧಗಂಗಾ ಮಠಕ್ಕೆ ಭೇಟಿ ನೀಡಿದಾಗ ಅವರು ನಮ್ಮೊಡನೆ ವೀರಶೈವ/ ಲಿಂಗಾಯತ ಸ್ವತಂತ್ರ ಧರ್ಮದ ವಿಷಯದ ಬಗ್ಗೆ ಚರ್ಚಿಸಿದಾಗ ವೀರಶೈವ ಎಂಬ ಪದ ವಿದ್ಯಾವಂತರು ಮತ್ತು ನಗರ ಪ್ರದೇಶದಲ್ಲಿ ಬಳಕೆಯಲ್ಲಿದೆ.

ಲಿಂಗಾಯಿತ ಎಂಬ ಪದ ಗ್ರಾಮೀಣ ಪ್ರದೇಶದಲ್ಲಿ ಬಳಕೆಯಲ್ಲಿದ್ದು ಈ ಎರಡು ಪದಗಳು ಒಂದೇ ಆಗಿದ್ದು ಎಲ್ಲಾ ಧಾರ್ಮಿಕ ಮುಖಂಡರು ಹಾಗೂ ಸಮಾಜಬಾಂಧವರು ಒಂದೆಡೆ ಕುಳಿತು ಸರ್ವ ಸಮ್ಮತವಾದ ನಿರ್ಧಾರ ಕೈಗೊಳ್ಳುವುದು ಸೂಕ್ತ ಎಂದು ನಮ್ಮ ಅಭಿಪ್ರಾಯ ತಿಳಿಸಿರುತ್ತೇವೆ. ಆದರೆ ಎಂ.ಬಿ. ಪಾಟೀಲ್ ರವರು ಲಿಂಗಾಯಿತ ಪದದ ಪರವಾಗಿ ಬೆಂಬಲ ಸೂಚಿಸಿದ್ದಾರೆ ಎಂಬಂತೆ ಮಾಧ್ಯಮಗಳಲ್ಲಿ ಪ್ರಕಟಿಸಿರುವುದು ತಿಳಿದು ಬಂದಿದೆ. ಸಮಾಜವನ್ನು ಈ ರೀತಿ ಇಬ್ಭಾಗ ಮಾಡುವ ರೀತಿಯಲ್ಲಿ ಯಾರೇ ಪ್ರಯತ್ನಿಸಿದರೂ ಸಮಾಜದ ಹಿತದೃಷ್ಟಿಯಿಂದ ಒಳ್ಳೆಯದಲ್ಲ. ಸಮಾಜದ ಮುಖಂಡರೆಲ್ಲ ಕುಳಿತು ಚರ್ಚಿಸಿ ಒಮ್ಮತ ರೂಪಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಶ್ರೀಗಳು ತಿಳಿಸಿದ್ದಾರೆ.

ಡೆಡ್ಲಿ ಗೇಮ್...ಮೈಸೂರಲ್ಲಿ ಬ್ಲೂವೇಲ್‌ಗೆ ವಿದ್ಯಾರ್ಥಿ ಬಲಿ!?

SUICIDE GAME

ಮೈಸೂರು: ಅತ್ಯಂತ ಅಪಾಯಕಾರಿ ಡೆಡ್ಲಿ ಬ್ಲೂವೇಲ್ ಗೇಮ್‌ಗೆ ವಿದ್ಯಾರ್ಥಿ ಬಲಿಯಾಗಿರುವ ಘಟನೆ ಮೇಟಗಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಈ ಬಗ್ಗೆ ಇಂದು ಪೋಷಕರು ಠಾಣೆಗೆ ದೂರು ನೀಡಿ ತನಿಖೆ ನಡೆಸುವಂತೆ ಮನವಿ ಮಾಡಿದ್ದಾರೆ.

ಪ್ರಕರಣ ಹಿನ್ನಲೆ:

ಇಡೀ ಯುವ ಸಮೂಹವನ್ನೇ ಬೆಚ್ಚಿ ಬೀಳಿಸಿರುವ ಡೆಡ್ಲಿ ಬ್ಲೂವೇಲ್ ಗೇಮ್ ಸಾಂಸ್ಕೃತಿಕ ನಗರಿಯುಲ್ಲಿ ಪ್ರಥಮ ಬಲಿ ತೆಗೆದುಕೊಂಡಿದೆ. ಪ್ರತಿಭಾವಂತ ವಿದ್ಯಾರ್ಥಿಯೋರ್ವ ಬ್ಲೂ ವೇಲ್ ಎಂಬ ಮೋಸದಾಟಕ್ಕೆ ಸಿಲುಕಿ ಆತ್ಮಹತ್ಯೆಗೆ ಶರಣಾಗಿದ್ದಾನೆ ಎಂಬ ಶಂಕೆ ವ್ಯಕ್ತವಾಗಿದೆ.

ಸಾಂಸ್ಕೃತಿಕ ನಗರಿ ಮೈಸೂರಿನ ಮೇಟಗಳ್ಳಿ ಬಡಾವಣೆಯ ನಿವಾಸಿ ಪ್ರಸನ್ನ ಹಾಗೂ ಪ್ರತಿಮಾ ದಂಪತಿಯ ಪುತ್ರ ತುಷಾರ್ (17) ಬ್ಲೂವೇಲ್ ಗೇಮ್‌ಗೆ ಬಲಿಯಾಗಿದ್ದಾನೆ ಎನ್ನಲಾಗ್ತಿದೆ.

ಸೆಪ್ಟೆಂಬರ್ 4ರಂದು ಸಂಜೆ ಕಾಲೇಜು ಮುಗಿಸಿ ಎಂದಿನಂತೆ ಮನೆಗೆ ಬಂದಿದ್ದ ತುಷಾರ್ ನೇಣು ಹಾಕಿಕೊಂಡು ಆತ್ಮಹತ್ಯೆಗೆ ಶರಣಾಗಿದ್ದ. ಇದರಿಂದ ಇಡೀ ಕುಟುಂಬ ಆಘಾತಕ್ಕೊಳಗಾಗಿ ತಂದೆ-ತಾಯಿ ಈತನಕ ಚೇತರಿಸಿಕೊಂಡಿಲ್ಲ.

ಮನೆ ಹಾಗೂ ಕಾಲೇಜಿನಲ್ಲಿ ಯಾವುದೇ ಸಮಸ್ಯೆ ಇರದೆ, ಅತ್ಯಂತ ಲವಲವಿಕೆಯಿಂದ ಓಡಾಡಿಕೊಂಡಿದ್ದ ತುಷಾರ್‌ನ ಈ ಸಾವು ಇಡೀ ಮನೆಯ ಸದಸ್ಯರನ್ನು ನೋವಿನಲ್ಲಿ ಮುಳುಗಿಸಿದೆ. ಇಷ್ಟಾದರೂ ತಂದೆ-ತಾಯಿ ಮಗ ಸತ್ತಿದ್ದೇಕೆ ಎಂಬ ಸತ್ಯವನ್ನು ಈತನಕ ಹೊರಹಾಕಿಲ್ಲ.

ಆತನ ಮೊಬೈಲ್‌ನಲ್ಲಿ ಬ್ಲೂವೇಲ್ ಗೇಮ್ ಪತ್ತೆ?

ಪೋಷಕರು ಮಗ ಆತ್ಮಹತ್ಯೆ ಮಾಡಿಕೊಂಡ ದಿನ ಲಿಖಿತ ಹೇಳಿಕೆ ನೀಡಿದ್ದರೂ ಅದರಲ್ಲಿ ಬ್ಲೂವೇಲ್ ಗೇಮ್ ಬಗ್ಗೆ ಯಾವುದೇ ಸ್ಪಷ್ಟ ಮಾಹಿತಿ ಇರಲಿಲ್ಲ ಎನ್ನಲಾಗಿದೆ. ಮಗ ಏತಕ್ಕಾಗಿ ಹೀಗ್ ಮಾಡ್ಕೊಂಡ ಅನ್ನೋದು ನಮಗೆ ಗೊತ್ತಿಲ್ಲ. ಅವನಿಗೆ ಯಾವುದೇ ಸಮಸ್ಯೆ ಇರಲಿಲ್ಲ ಅಂತಾರೆ.

ಈ ಮಧ್ಯೆ ಕಳೆದ ವಾರ ಯಾವುದೇ ನಿಖರವಾದ ಕಾರಣವಿಲ್ಲದೆ ಆತ್ಮಹತ್ಯೆಗೆ ಶರಣಾಗಿದ್ದ ವಿದ್ಯಾರ್ಥಿ ತುಷಾರ್ ಮೊಬೈಲ್‌ನಲ್ಲಿ ಬ್ಲೂ ವೇಲ್ ಗೇಮ್ ಆ?ಯಪ್ ಇದ್ದದ್ದು ಖಚಿತವಾಗಿದೆ ಎನ್ನಲಾಗ್ತಿದೆ. ಈ ಬಗ್ಗೆ ಆತನ ಸ್ನೇಹಿತರು ಮಾಧ್ಯಮದವರಿಗೆ ಕರೆ ಮಾಡಿ ತಿಳಿಸಿದ್ದರು. ಆದರೆ ಮೃತ ತುಷಾರ್ ಪೋಷಕರಿಗೆ ಮಾಹಿತಿ ಕೇಳಿದಾಗ ಈ ಬಗ್ಗೆ ಗೊತ್ತಿಲ್ಲವೆಂದು ಪ್ರತಿಕ್ರಿಯಿಸಿದ್ದಾರೆ.

ಆದರೂ ಮಗನ ಸಾವು ಹೇಗಾಯಿತು, ಇದಕ್ಕೆ ಕಾರಣವೇನು ಎಂಬ ಬಗ್ಗೆ ತನಿಖೆ ನಡೆಸುವಂತೆ ಇಂದು ಮೇಟಗಳ್ಳಿ ಠಾಣೆಗೆ ಪೋಷಕರು ದೂರು ನೀಡಿದ್ದಾರೆ.

ಪ್ರಾಂಶುಪಾಲರು ಹೇಳಿದ್ದೇನು

ತುಷಾರ್ ನಮ್ಮ ಕಾಲೇಜಿನ ಪ್ರತಿಭಾವಂತ ವಿದ್ಯಾರ್ಥಿ. ಕ್ರೀಡಾ ಚಟುವಟಿಕೆಗಳಲ್ಲಿ ಯಾವತ್ತೂ ಮುಂದಿರುತ್ತಿದ್ದ. ಆತನ ಆತ್ಮಹತ್ಯೆ ನಮಗೂ ದಿಗ್ಭ್ರಮೆ ಮೂಡಿಸಿದೆ. ಬ್ಲೂವೇಲ್ ಗೇಮ್‌ಗೆ ಬಲಿಯಾಗಿದ್ದಾನಾ ಅನ್ನೋದು ನಮಗೂ ಗೊತ್ತಾಗುತ್ತಿಲ್ಲ ಅಂತಾರೆ ಕಾಲೇಜಿನ ಪ್ರಾಂಶುಪಾಲರು ಆರೀಫ಼್.

ಅಪಾಯುಕಾರಿ ಗೇಮ್ ಬ್ಲೂವೇಲ್ ಹುಡುಕುವುದರಲ್ಲಿ ಮೈಸೂರು ಮೊದಲ ಸ್ಥಾನದಲ್ಲಿದೆ ಎಂಬ ಮಾಹಿತಿ ಹೊರಬಿದ್ದ ತಕ್ಷಣ ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಮೂಲಕ ಎಲ್ಲಾ ಶಾಲೆಗಳಿಗೂ ಈ ಗೇಮ್ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಕೆಲಸ ಆರಂಭಿಸಬೇಕೆಂದು ಸುತ್ತೋಲೆ ಹೊರಡಿಸಿತ್ತು. ಏನೇ ಆಗಲಿ ಇಂತಹ ಅಪಾಯಕಾರಿ ಗೇಮ್‌ನಿಂದ ಹಲವು ಅನಾಹುತಗಳು ಸಂಭವಿಸುತ್ತಿರುವ ಬಗ್ಗೆ ಎಲ್ಲ ಮಾಧ್ಯಗಳಲ್ಲಿ ಸುದ್ದಿಗಳು ಪ್ರಸಾರವಾಗುತ್ತಿದ್ದು, ವಿದ್ಯಾರ್ಥಿಗಳು ಹಾಗೂ ಯುವ ಜನತೆ ಎಚ್ಚೆತ್ತುಕೊಳ್ಳಬೇಕಿದೆ.

ಮುಖ್ಯ ಶಿಕ್ಷಕಿಗೇ ಕಿರುಕುಳ : ಆತ್ಮಹತ್ಯೆ

ಚಿತ್ರದುರ್ಗ: ಚಿತ್ರದುರ್ಗ ಮೊಲಕಾಲ್ಮುರು ತಾಲೂಕಿನಲ್ಲಿರುವ ರಾಂಪುರ ಗ್ರಾಮದ ಅಕ್ಕಮಹಾದೇವಿ ಕಾಲೋನಿಯಲ್ಲಿನ ತನ್ನ ಮನೆಯಲ್ಲಿ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕಿ ಓರ್ವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಆತ್ಮಹತ್ಯೆ ಮಾಡಿಕೊಂಡಿರುವ ಶಿಕ್ಷಕಿ ತಿಪ್ಪೀರಮ್ಮ ಮೊಲಕಲ್ಮುರು ತಾಲ್ಲೂಕಿನ ದೇವಾಸುಮುದ್ರ ಹಳ್ಳಿಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಆಗಿದ್ದರು.

ಪೊಲೀಸರು ದೂರಿನ ಪ್ರಕಾರ, ಶಾಲಾ ಅಭಿವೃದ್ಧಿ ಸಮಿತಿಯ ಸದಸ್ಯ ಲಿಂಗಪ್ಪ ಮತ್ತು ಸಹ-ಶಿಕ್ಷಕರಾದ ಸವಿತಾ, ಶಂತಮ್ಮ ಮತ್ತು ರಮೇಶ್ ಅವರು ಮುಖ್ಯ ಶಿಕ್ಷಕಿಗೆ ದಿನನಿತ್ಯ ಕಿರುಕುಳ ನೀಡುತ್ತಿದ್ದರು ಎಂದು ಆರೋಪಿಸಲಾಗಿದೆ.

ಶಿಕ್ಷಕಿಯ ಪತಿ ಪಾತಣ್ಣ ನೀಡಿದ ದೂರಿನಂತೆ, ಶಿಕ್ಷಕಿ, ವಿದ್ಯಾರ್ಥಿಗಳ ಶೂ ಖರೀದಿಯಲ್ಲಿ ಅವ್ಯವಹಾರ ನಡೆಸಿದ್ದಾರೆ ಎಂದು ಆರೋಪವಿದೆ. ತನ್ನ ಪತ್ನಿಯ ಮೇಲೆ ವ್ಯಥಾ ಸುಳ್ಳು ಆರೋಪ ಹೊರಿಸಲಾಗಿತ್ತು. ಈ ಆರೋಪದಿಂದ ಮನನೊಂದು ಆಕೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳಲಾಗಿದೆ.

ಈ ಸಂಬಂಧ ರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಪೋಲೀಸ್ ತನಿಖೆ ನಡೆಯುತ್ತಿದೆ.

ರಾಜಕೀಯ ವೈಫಲ್ಯ ಅನಾವರಣಗೊಳಿಸಿದ ರಾಹುಲ್ ಗಾಂಧಿ



ನವದೆಹಲಿ: ಕಾಂಗ್ರೆಸ್ ಉಪಾಧ್ಯಕ್ಷ ರಾಹುಲ್ ಗಾಂಧಿ ವಿಫಲ ರಾಜಕಾರಣಿಯಾಗಿದ್ದು, ತಮ್ಮ ರಾಜಕೀಯ ವೈಫಲ್ಯತೆಯನ್ನು ಅಮೆರಿಕದಲ್ಲಿ ಅನಾವರಣಗೊಳಿಸಿದ್ದಾರೆ ಎಂದು ಕೇಂದ್ರ ಸಚಿವೆ ಸ್ಮೃತಿ ಇರಾನಿ ಹೇಳಿದ್ದಾರೆ.

ಅಮೆರಿಕದ ಕ್ಯಾಲಿಫೋರ್ನಿಯಾದಲ್ಲಿ ಬರ್ಕ್ ಲೇ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ಜೊತೆ ಕಾಂಗ್ರೆಸ್ ಉಪಾಧ್ಯಕ್ಷ ರಾಹುಲ್ ಗಾಂಧಿ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಈ ಸಂವಾದ ಕಾರ್ಯಕ್ರಮ ಕುರಿತಂತೆ ಮಾತನಾಡಿದ ಕೇಂದ್ರ ಸಚಿವೆ ಸ್ಮೃತಿ ಇರಾನಿ, ರಾಹುಲ್ ಗಾಂಧಿ ಅವರನ್ನು ಓರ್ವ ವಿಫಲ ರಾಜಕಾರಣಿ ಎಂದು ಜರಿದಿದ್ದಾರೆ. "ರಾಜಕೀಯದಲ್ಲಿ ಸೋತ ರಾಹುಲ್ ಗಾಂಧಿ ವಿದೇಶಗಳಲ್ಲೂ ಸುಳ್ಳು ಹೇಳಲು ಆರಂಭಿಸಿದ್ದಾರೆ. ಬಿಜೆಪಿ ಪಕ್ಷ ಯಾವುದೋ ಒಂದು ರಾಜಕೀಯ ವಂಶಕ್ಕೆ ಸೀಮಿತವಾದ ಪಕ್ಷವಲ್ಲ. ದೇಶದ ಪ್ರಧಾನಿ ಮೋದಿ ಸಾಮಾನ್ಯ ಕುಟುಂಬದಿಂದ ಬಂದವರಾಗಿದ್ದು, ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಅಳಿವಿನಂಚಿನ ದಲಿತ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಅವರು ರೈತ ಕುಟುಂಬದವರಾಗಿದ್ದಾರೆ. ಬಿಜೆಪಿ ರಾಷ್ಟ್ರಾಧ್ಯಕ್ಷ ಅಮಿತ್ ಶಾ ಅವರು ಯಾವುದೇ ರಾಜಕೀಯ ವಂಶದ ಕುಟುಂಬದಿಂದ ಬಂದವರಲ್ಲ. ಬಿಜೆಪಿಯಲ್ಲಿ ಸಾಮಾನ್ಯರೇ ತಮ್ಮ ಸಾಧನೆಗಳ ಮೂಲಕ ಸಾಧಕರಾಗಿದ್ದಾರೆ ಎಂದು ಹೇಳಿದರು.

ಅಂತೆಯೇ ಕಾಂಗ್ರೆಸ್ ವಿರುದ್ಧ ಕಿಡಿಕಾರಿದ ಸ್ಮೃತಿ ಇರಾನಿ, ಸತತ ಚುನಾವಣಾ ವೈಫಲ್ಯಗಳಿಂದ ಕಾಂಗ್ರೆಸ್ ಪಕ್ಷ ಹೈರಾಣಾಗಿದ್ದು, ಸೋನಿಯಾಗಾಂಧಿ ಹಾಗೂ ರಾಹುಲ್ ಗಾಂಧಿ ಅವರ ನಾಯಕತ್ವದಲ್ಲಿ ಕಾಂಗ್ರೆಸ್ ಪಕ್ಷ ಅಹಂಕಾರದಿಂದ ವರ್ತಿಸುತ್ತಿದೆ. ತನ್ನ ಈ ಗುಣದಿಂದಾಗಿಯೇ ಕಾಂಗ್ರೆಸ್ ಪಕ್ಷ ದೊಡ್ಡ ದೊಡ್ಡ ಚುನಾವಣೆಗಳಲ್ಲಿ ಹೀನಾಯವಾಗಿ ಸೋತಿದೆ. ಹೀಗಿದ್ದೂ ಆ ಪಕ್ಷದ ಮುಖಂಡರಿಗೆ ಬುದ್ಧಿ ಬಂದಂತೆ ಕಾಣುತ್ತಿಲ್ಲ. ಭಾರತದಲ್ಲಿ ಜನ ಸಂಪರ್ಕ ಸಾಧಿಸಲಾಗದ ರಾಹುಲ್ ಗಾಂಧಿ ಅಮೆರಿಕ್ಕೆ ತೆರಳಿ ಅಲ್ಲಿ ತಮ್ಮ ವಿರೋಧಿಗಳ ವಿರುದ್ಧ ಮಾತನಾಡುತ್ತಿದ್ದಾರೆ.

ಅಲ್ಲದೆ ರಾಹುಲ್ ಗಾಂಧಿ ಅವರಂತಹ ವ್ಯಕ್ತಿಗಳಿಗೆ ಪ್ರಧಾನಿ ಮೋದಿ ಅವರ ಕುರಿತಾಗಲೀ ಅಥವಾ ಜಮ್ಮು ಮತ್ತು ಕಾಶ್ಮೀರದಂತಹ ವಿಚಾರಗಳ ಬಗ್ಗೆಯಾಗಲಿ ಮಾತನಾಡುವ ನೈತಿಕತೆಯೇ ಇಲ್ಲ. ಕಾಶ್ಮೀರದ ಜನತೆಯ ಹಿತಾಸಕ್ತಿಯನ್ನು ಗಮನದಲ್ಲಿರಿಸಿಕೊಂಡು ರಾಹುಲ್ ಗಾಂಧಿ ಮಾತನಾಡಲಿ ಎಂದು ಸ್ಮೃತಿ ಇರಾನಿ ಹೇಳಿದ್ದಾರೆ.

ಚಿಂತಕರು ಸೇರಿ 16 ಮಂದಿಗೆ ಸರ್ಕಾರದಿಂದ ಪೊಲೀಸ್ ಭದ್ರತೆ

ಬೆಂಗಳೂರು: ಜೀವ ಬೆದರಿಕೆ ಹಿನ್ನೆಲೆಯಲ್ಲಿ ನಗರದಲ್ಲಿರುವ ಬರಹಗಾರರು ಹಾಗೂ ಚಿಂತಕರು ಸೇರಿ 16 ಮಂದಿಗೆ ಪೊಲೀಸ್ ಭದ್ರತೆ ಒದಗಿಸಲಾಗಿದೆ.

ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆಯ ಹಿನ್ನೆಲೆಯಲ್ಲಿ, ಸಿಎಂ ಸಿದ್ದರಾಮಯ್ಯ ನಿರ್ದೇಶನದಂತೆ 16 ಮಂದಿಗೆ ಪೊಲೀಸ್ ಭದ್ರತೆ ನೀಡಲಾಗಿದೆ. ಗುಪ್ತಚರ ಇಲಾಖೆ ವರದಿ ಅನ್ವಯ ಇವರಿಗೆಲ್ಲಾ ಒಬ್ಬೊಬ್ಬ ಸೆಕ್ಯೂರಿಟಿ ಅಧಿಕಾರಿಯನ್ನು ನಿಯೋಜಿಸಲಾಗಿದೆ.

ಸಂಶೋಧಕ ಎಂ.ಚಿದಾನಂದಮೂರ್ತಿ, ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್. ದೊರೆಸ್ವಾಮಿ, ಗಿರೀಶ್ ಕಾರ್ನಾಡ, ಚಂದ್ರಶೇಖರ ಕಂಬಾರ, ಬರಗೂರು ರಾಮಚಂದ್ರಪ್ಪ, ಡಾ. ಸಿದ್ದಲಿಂಗಯ್ಯ, ಸಿಎಂ ಸಲಹೆಗಾರ ದಿನೇಶ್ ಅಮಿನ್ ಮಟ್ಟು, ನಿವೃತ್ತ ಐಎಎಸ್ ಅಧಿಕಾರಿ ಎಸ್.ಎ ಜಾಮದಾರ್ ಅವರಿಗೆ ಸರ್ಕಾರ ಭದ್ರತೆ ಒದಗಿಸಿದೆ.

ನಿಡುಮಾಮಿಡಿ ಮಠದ ಚೆನ್ನಮಲ್ಲಸ್ವಾಮೀಜಿ, ಚಂದ್ರಶೇಖರ ಪಾಟೀಲ, ಪ್ರಜಾ ಪರಿವರ್ತನಾ ವೇದಿಕೆಯ ಬಿ. ಗೋಪಾಲ, ಸಿ.ಎಸ್. ದ್ವಾರಕನಾಥ್, ಕೆ. ಮರುಳಸಿದ್ದಪ್ಪ, ಬಿ.ಟಿ. ಲಲಿತಾನಾಯಕ್, ಟಿ.ಎನ್. ಸೀತಾರಾಂ, ಕೆ.ಎಸ್. ವಿಮಲಾ, ಅವರಿಗೂ ಪೊಲೀಸ್ ಭದ್ರತೆ ನೀಡಲಾಗಿದೆ.

ರಾಮಲಿಂಗಾರೆಡ್ಡಿಗೆ ದೇವೇಗೌಡರ ಉತ್ತರ

ಬೆಂಗಳೂರು: ಬಿಬಿಎಂಪಿ ಮೈತ್ರಿ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದವ ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡರು, ಸೆ. 28 ರಂದು ಬಿಬಿಎಂಪಿ ಮೇಯರ್, ಉಪ ಮೇಯರ್ ಸ್ಥಾನಕ್ಕೆ ಚುನಾವಣೆ ಇದೆ. ಹೀಗಾಗಿ ಪಕ್ಷದ ಮುಖಂಡರು, ಬಿಬಿಎಂಪಿ ಸದಸ್ಯರ ಜೊತೆ ಕುಮಾರಸ್ವಾಮಿ ಮಾತನಾಡಿದ್ದಾರೆ ಎಂದರು. ಖಾಸಗಿ ಹೋಟೆಲ್‌ನಲ್ಲಿ ನಡೆದ ಸಭೆ ನಂತರ ಸುದ್ದಿಗಾರರ ಜೊತೆ ಮಾತನಾಡಿದ ಗೌಡರು, ಇಂದು ಬೆಳಿಗ್ಗೆ ರಾಮಲಿಂಗಾರೆಡ್ಡಿ ಅವರು ಈ ವಿಚಾರವಾಗಿ ಭೇಟಿ ಮಾಡಿದರು. ಬಿಬಿಎಂಪಿ ಮೈತ್ರಿ ವಿಚಾರವನ್ನು ಕುಮಾರಸ್ವಾಮಿಯವರ ಜೊತೆಗೆ ಚರ್ಚಿಸಲು ಹೇಳಿದ್ದೇನೆ. ಬಿಬಿಎಂಪಿ ಮೈತ್ರಿ ವಿಚಾರವಾಗಿ ಅಂತಿಮ ನಿರ್ಧಾರ ಕುಮಾರಸ್ವಾಮಿ ಯವರಿಗೆ ವಹಿಸಲಾಗಿದೆ. ಇನ್ನು ಕುಮಾರಸ್ವಾಮಿಯವರನ್ನು ಭೇಟಿ ಮಾಡುವಂತೆ ಸಚಿವ ರಾಮ ಲಿಂಗಾರೆಡ್ಡಿ ಅವರಿಗೆ ಹೇಳಿದ್ದೇನೆ ಎಂದರು.

ಅಮಿತ್ ಶಾಗೆ ಕೋರ್ಟ್ ಸಮನ್ಸ್

ಅಹಮದಾಬಾದ್: 2002ರಲ್ಲಿ ನಡೆದ ನರೋಡ ಗಾಮ್ ದೊಂಬಿ ಪ್ರಕರಣಕ್ಕೆ ಸಂಬಂಧಿಸಿದಂತೆ ರಕ್ಷಣಾ ಸಾಕ್ಷಿದಾರನಾಗಿ ವಿಚಾರಣೆಗೆ ಹಾಜರಾಗುವಂತೆ ಬಿಜೆಪಿ ಅಧ್ಯಕ್ಷ ಅಮಿತ್ ಶಾ ಅವರಿಗೆ ವಿಶೇಷ ಎಸ್‌ಐಟಿ ಕೋರ್ಟ್ ಇಂದು ಸಮನ್ಸ್ ಜಾರಿ ಮಾಡಿದೆ. 11 ಮಂದಿಯನ್ನು ಬಲಿ ಪಡೆದ ನರೋಡ ದೊಂಬಿ ಪ್ರಕರಣದ ಪ್ರ ಮುಖ ಆರೋಪಿ, ಗುಜರಾತ್ ಮಾ ಜಿ ಸಚಿವ ಮಾಯಾ ಕೊಡ್ನಾನಿ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆ ಸಿದ ವಿಶೇಷ ಎಸ್‌ಐಟಿ ನ್ಯಾಯಾ ಧೀಶ ಪಿ ಬಿ ದೇಸಾಯಿ ಅವರು, ಸೆಪ್ಟೆಂ ಬರ್ 18ರಂದು ಖುದ್ದು ವಿಚಾರಣೆಗೆ ಹಾಜರಾಗುವಂತೆ ಅಮಿತ್ ಶಾಗೆ ಸಮನ್ಸ್ ನೀಡಿದ್ದಾರೆ. ಅಲ್ಲದೆ ಒಂದು ವೇಳೆ ಶಾ ವಿಚಾರಣೆಗೆ ಹಾಜರಾಗ ದಿದ್ದರೆ ಮತ್ತೊಮ್ಮೆ ಸಮನ್ಸ್ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಅಮಿತ್ ಶಾ ಅವರು ಪ್ರಕರಣದಲ್ಲಿ ಕೊಡ್ನಾನಿ ಪರ ಸಾಕ್ಷಿದಾರರಾಗಿದ್ದು, ಕೊಡ್ನಾನಿ ಪರ ವಕೀಲ ಅಮಿತ್ ಪಟೇ ಲ್ ನೀಡಿದ ಬಿಜೆಪಿ ಅಧ್ಯಕ್ಷರ ಅಹಮ ದಾಬಾದ್ ನಿವಾಸದ ವಿಳಾಸಕ್ಕೆ ಕೋರ್ಟ್‌ಸಮನ್ಸ್ ನೀಡಿದೆ. ದೊಂಬಿ ನಡೆದಾಗ ಸ್ಥಳದಲ್ಲಿ ಇರಲಿಲ್ಲ ಎಂಬುದನ್ನು ಸಾಕ್ಷ್ಯಾಧಾರ ಸಹಿತ ನಿರೂಪಿಸಲು ಅಮಿತ್ ಶಾ ಮತ್ತು ಇತರೆ 13 ಮಂದಿ ಸಾಕ್ಷಿಗಳನ್ನು ಕರೆಸಿಕೊಳ್ಳಲು ಅನುಮತಿ ನೀಡಬೇಕೆಂದು ಕೋರಿದ್ದಾರೆ.

ಮೋಡ ಬಿತ್ತನೆಯಿಂದ ಉತ್ತಮ ಫಲಿತಾಂಶ

ಶಿವಮೊಗ್ಗ: ರಾಜ್ಯದಲ್ಲಿ ಮೋಡ ಬಿತ್ತನೆಯಿಂದ ಉತ್ತಮ ಫಲಿತಾಂಶ ಸಿಕ್ಕಿದೆ. ಈ ನಿಟ್ಟಿನಲ್ಲಿ ಅನುಕೂಲಕರ ವಾತಾವರಣ ನೋಡಿಕೊಂಡು ಶಿವಮೊಗ್ಗದಲ್ಲೂ ಸಹ ಮೋಡ ಬಿತ್ತನೆ ಕಾರ್ಯ ಮಾಡಲಾಗುವುದು ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಹೇಳಿದ್ದಾರೆ. ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಮೋಡ ಬಿತ್ತನೆ ಹೇಗೆ ನಡೆಯುತ್ತದೆ ಎಂದು ನೋಡಲು ಎಲ್ಲ ಜಿಲ್ಲಾ ಉಸ್ತುವಾರಿ ಸಚಿವರನ್ನು ಆಹ್ವಾನಿಸಿದ್ದೇನೆ. ಕೊಟ್ಟ ಮಾತಿನಂತೆ ತುಂಗಾ ಮೇಲ್ದಂಡೆ ಯೋಜನೆ ವಿಚಾರದಲ್ಲಿ ನಡೆದುಕೊಳ್ಳುತ್ತೇನೆ. ಕಾಮಗಾರಿ ಪ್ರಗತಿಯಲ್ಲಿದ್ದು, ಒಂದು ಟ್ರಾನ್ಸ್‌ಫಾರ್ಮರ್ ಅಗತ್ಯವಿದೆ. ಅದು ಸಿಗದಿರುವುದರಿಂದ ಕಾಮಗಾರಿ ವಿಳಂಬವಾಗಿದೆ. ನಮ್ಮಲ್ಲೇ ಹುಟ್ಟುವ ನದಿಗಳ ನೀರನ್ನು ನಾವು ಬಳಸಿಕೊಳ್ಳ ಬೇಕು. ಅದಕ್ಕೆ ಪೂರಕ ಕೆಲಸ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಬೆಕ್ಕಿನ ಮಲದಿಂದ ಕಾಫಿಪುಡಿ ಉತ್ಪಾದನೆ ....?

ನವದೆಹಲಿ: ಏಷ್ಯಾದಲ್ಲಿ ಮೂರನೇ ಅತಿ ದೊಡ್ಡ ಕಾಫಿ ಉತ್ಪಾದಕ ರಾಷ್ಟ್ರವಾಗಿರುವ ಭಾರತ ಈಗ ಕರ್ನಾಟಕದ ಕೊಡಗು ಜಿಲ್ಲೆಯಲ್ಲಿ ಬೆಕ್ಕಿನ ಮಲದಿಂದ ವಿಶ್ವದ ಅತ್ಯಂತ ದುಬಾರಿ ಕಾಫಿಪುಡಿ ಉತ್ಪಾದನೆಗೆ ಚಾಲನೆ ನೀಡಿದೆ.

ಸಿವೆಟ್ ಕಾಫಿ ವಿಶ್ವದ ದುಬಾರಿ ಕಾಫಿ ಎಂದೇ ಪ್ರಸಿದ್ಧಿ ಪಡೆದಿದ್ದು, ಇದಕ್ಕೆ ಕನ್ನಡದಲ್ಲಿ ಪುನುಗು ಬೆಕ್ಕಿನ ಕಾಫಿ ಪುಡಿ ಎಂದು ಕರೆಯಲಾಗುತ್ತದೆ. ಕುಡಿಯಲು ರುಚಿ ಎನಿಸುವ ಈ ಕಾಫಿ ಬೆಲೆ ಜೇಬು ಸುಡುವುದರಲ್ಲಿ ಎರಡು ಮಾತಿಲ್ಲ. ಇದರ ಬೆಲೆ ಒಂದು ಕೆಜಿಗೆ 20 ಸಾವಿರದಿಂದ 25 ಸಾವಿರ ರುಪಾಯಿ.

ಇನ್ನು ಈ ಕಾಫಿಯುನ್ನು ತಯಾರಿಸುವ ವಿಧಾನ ಕೇಳಿದ್ರೆ ಆಶ್ಚರ್ಯವಾಗುತ್ತೆ. ಹಾಗೆ ವಾಕರಿಕೆ ಬರುತ್ತೆ. ಈ ಕಾಫಿಪುಡಿ ತಯಾರಾಗುವುದು ಬೆಕ್ಕಿನ ಮಲದಿಂದ. ಆದರೆ ಪುನುಗು ಬೆಕ್ಕಿನ ದೇಹದಿಂದ ಹೊರಬೀಳುವ ತ್ಯಾಜ್ಯವನ್ನು ಸಂಗ್ರಹಿಸುವ ಕಾರ್ಯ ಅತ್ಯಂತ ತ್ರಾಸದಾಯಕವಾಗಿರುವ ಕಾರಣ ಈಗ ಸಣ್ಣ ಮಟ್ಟದಲ್ಲಿ ಸಿವೆಟ್ ಕಾಫಿ ತಯಾರಿಸುವ ಉಪ ಕ್ರಮವನ್ನು ಕೊಡಗಿನಲ್ಲಿರುವ ಕೂರ್ಗ್ ಕನ್ಸಾಲಿಡೇಟೆಡ್ ಕಮಾಡಿಟೀಸ್ (ಸಿಸಿಸಿ) ಆರಂಭಿಸಿದೆ.

ಆರಂಭಿಕ ಹಂತದಲ್ಲಿ 20 ಕೆಜಿ ಸಿವೆಟ್ ಕಾಫಿ ಉತ್ಪಾದಿಸಲಾಗಿದೆ. 2015-16ರಲ್ಲಿ 60 ಕೆಜಿ ಹಾಗೂ ಕಳೆದ ವರ್ಷ 200 ಕೆಜಿ ಕಾಫಿಪುಡಿ ಉತ್ಪಾದಿಸಲಾಗಿದೆ. ಅಕ್ಟೋಬರ್‌ನಲ್ಲಿ ಪ್ರಥಮ ಬೆಳೆ ಕಟಾವಿಗೆ ಬರುವಾಗ ಸುಮಾರು 50 ಕೆಜಿ ಸಿವೆಟ್ ಕಾಫಿ ಉತ್ಪಾದಿಸುವ ನಿರೀಕ್ಷೆ ಇದೆ ಎಂದು ಸಿಸಿಸಿಯ ಸಂಸ್ಥಾಪಕರಲ್ಲಿ ಒಬ್ಬರಾದ ನರೇಂದ್ರ ಹೆಬ್ಬಾರ್ ಪಿಟಿಐ ಸುದ್ದಿ ಸಂಸ್ಥೆಗೆ' ತಿಳಿಸಿದೆ ಎಂದು ವರದಿ ಹೇಳಿದೆ.

ಉಕ್ಕಿ ಹರಿಯುತ್ತಿರುವ ಭೀಮಾ ನದಿ

ಒಡಲು: ರೈತರ ಮುಖದಲ್ಲಿ ಮಂದಹಾಸ

ಯಾದಗಿರಿ: ಜಿಲ್ಲೆಯ ರೈತರ ಜೀವನಾಡಿ ಭೀಮಾ ನದಿ ಕಳೆದ ಒಂದು ವಾರದಿಂದ ಉಕ್ಕಿ ಹರಿಯುತ್ತಿದೆ. ನದಿ ಒಡಲು ಮೈದುಂಬಿ ಹರಿಯುತ್ತಿರುವ ಕಾರಣ ಅನ್ನದಾತರ ಮುಖದಲ್ಲಿ ಮಂದಹಾಸ ಮೂಡಿದೆ.

ಕಳೆದ ವರ್ಷ ಮಳೆ ಕೊರತೆ ಹಿನ್ನೆಲೆ ಭೀಮಾ ನದಿ ಬರಡಾಗಿತ್ತು. ಈಗ ಮಹಾರಾಷ್ಟ್ರದಲ್ಲಿ ಸುರಿಯುತ್ತಿರುವ ಭಾರಿ ಮಳೆಗೆ ಭೀಮಾ ನದಿಯಲ್ಲಿ ಹೆಚ್ಚಿನ ನೀರಿನ ಹರಿವು ಕಾಣಿಸಿಕೊಂಡಿದೆ. ಗುರುಸಣಗಿ ಹತ್ತಿರವಿರುವ ಬ್ಯಾರೇಜ್ ತುಂಬಿದ್ದು, ಬ್ಯಾರೇಜ್ ಮೂಲಕ ನದಿಗೆ ನೀರು ಬಿಡಲಾಗುತ್ತಿದೆ. ನದಿಯ ನೀರಿಗೆ ನಗರದ ಹೊರಭಾಗದಲ್ಲಿರುವ ಈಶ್ವರ ಲಿಂಗ ಜಲಾವೃತಗೊಂಡಿದೆ. ಹೆಚ್ಚಿನ ನೀರು ಬಂದ್ರೆ ಈಶ್ವರ ಲಿಂಗ ನೀರಿನಲ್ಲಿ ಮುಳುಗುತ್ತದೆ.

ಕಳೆದ ವರ್ಷ ಭೀಮಾ ನದಿಯಲ್ಲಿ ನೀರಿನ ಕೊರತೆ ಹಿನ್ನೆಲೆ ನಗರದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ತಲೆದೋರಿತ್ತು. ಈಗ ನದಿ ಉಕ್ಕಿ ಹರಿಯುತ್ತಿರುವ ಕಾರಣ ನಗರದ ಜನರಿಗೆ, ನದಿ ತೀರದಲ್ಲಿರುವ ರೈತರಿಗೆ ಹಾಗೂ ಗ್ರಾಮಸ್ಥರಿಗೆ ಕುಡಿಯುವ ನೀರಿನ ಅನುಕೂಲವಾಗಿದೆ. ಜನರು ಕುತುಹಲದಿಂದ ನದಿಯ ಸೇತುವೆ ಪ್ರದೇಶಕ್ಕೆ ಆಗಮಿಸಿ ಉಕ್ಕಿ ಹರಿಯುವ ನೀರನ್ನು ಕಣ್ತುಂಬಿಕೊಳ್ಳುತ್ತಿದ್ದಾರೆ.

ಪ್ರವಾಸಿಗರು ಮುಕ್ತ ಪ್ರದೇಶದಲ್ಲಿ ಅಡುಗೆ ಮಾಡುವಂತಿಲ್ಲ

ಪಣಜಿ: ಸೂರ್ಯಾಸ್ತವಾದ ನಂತರ ಗೋವಾ ಬೀಚ್ ನಲ್ಲಿ ಈಜುವುದನ್ನು ನಿಷೇಧಿಸಿದ ನಂತರ ಮುಖ್ಯಮಂತ್ರಿ ಮನೋಹರ್ ಪರಿಕ್ಕರ್ ಇದೀಗ ಪ್ರವಾಸಿಗರು ರಾಜ್ಯದಲ್ಲಿ ಮುಕ್ತ ಪ್ರದೇಶಗಳಲ್ಲಿ ಅಡುಗೆ ಮಾಡುವುದನ್ನು ನಿಷೇಧಿಸಿ ಆದೇಶ ಹೊರಡಿಸಿದ್ದಾರೆ.

ನಿನ್ನೆ ಮುಖ್ಯಮಂತ್ರಿ ಮನೋಹರ್ ಪರಿಕ್ಕರ್ ನೇತೃತ್ವದಲ್ಲಿ ಪ್ರವಾಸೋದ್ಯಮ ಪಾಲುದಾರರ ಸಭೆ ನಡೆಯಿತು. ಪ್ರವಾಸಿಗರ ಗುಂಪು ಸಾರ್ವಜನಿಕ ಸ್ಥಳಗಳಲ್ಲಿ ಅಡುಗೆ ಮಾಡುವುದು ಅಶುಚಿಯಾಗುವುದಲ್ಲದೆ, ಎಲ್ಲೆಂದರಲ್ಲಿ ಕಸ,ಕಡ್ಡಿ ಪದಾರ್ಥಗಳನ್ನು ಎಸೆದು ಪರಿಸರವನ್ನು ಹಾಳು ಮಾಡಲಾಗುತ್ತದೆ. ಹೀಗಾಗಿ ಇದಕ್ಕೆ ನಿಷೇಧ ಹೇರುವಂತೆ ಮುಖ್ಯಮಂತ್ರಿ ಆದೇಶ ನೀಡಿದ್ದಾರೆ.

ಈ ಬಗ್ಗೆ ಸುದ್ದಿ ಸಂಸ್ಥೆಗೆ ಮಾಹಿತಿ ನೀಡಿದ ರಾಜ್ಯ ಪ್ರವಾಸೋದ್ಯಮ ಸಚಿವ ಮನೋಹರ್ ಅಜಗೌಂಕರ್, ಪ್ರವಾಸಿಗರು ಸೂರ್ಯಾಸ್ತದ ನಂತರ ಸಮುದ್ರದಲ್ಲಿ ಈಜಾಡುವುದರಿಂದ ಆಗುವ ಅಪಾಯಗಳ ಬಗ್ಗೆ ಪ್ರವಾಸಿಗರಿಗೆ ಜಾಗೃತಿ ಮೂಡಿಸಲು ಸಾಮೂಹಿಕ ಅರಿವು ಮೂಡಿಸುವ ಅಭಿಯಾನ ಕೈಗೊಳ್ಳುವ ಕುರಿತು ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು.

ಮುಕ್ತ ಪ್ರದೇಶದಲ್ಲಿ ಪ್ರವಾಸಿಗರು ಅಡುಗೆ ಮಾಡುವುದು ಒಳ್ಳೆಯದಲ್ಲ ಇದು ಸುತ್ತಮುತ್ತಲ ಜನರಿಗೆ ತೊಂದರೆಯುಂಟುಮಾಡುವುದಲ್ಲದೆ ಹಾಗೆಯೇ ಕಸ-ಕಡ್ಡಿಗಳನ್ನು ಎಸೆದು ಹೋಗುತ್ತಾರೆ. ಬಸ್ಸುಗಳಲ್ಲಿ ಪ್ರಯಾಣಿಸಿ ಬಂದು ಮುಕ್ತ ಪ್ರದೇಶದಲ್ಲಿ ಅಡುಗೆ ಮಾಡಿ ಊಟ ಮಾಡಿ ವಸ್ತುಗಳನ್ನೆಲ್ಲಾ ಎಸೆದು ಪರಿಸರ ನಾಶ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ಪೊಲೀಸರಿಗೆ ಸೂಚನೆ ನೀಡಿದ್ದೇವೆ ಎಂದು ಹೇಳಿದರು.

ಬಿಬಿಎಂಪಿಯಲ್ಲಿ ಜೆಡಿಎಸ್-ಕಾಂಗ್ರೆಸ್ ಮೈತ್ರಿ ಮುಂದುವರಿಕೆ :ಸಂಪತ್ ಮೇಯರ್, ನೇತ್ರ ಉಪಮೇಯರ್..?



ಬೆಂಗಳೂರು, ಸೆ.12- ಬಿಬಿಎಂಪಿಯಲ್ಲಿ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಮುಂದುವರಿಕೆ ಅಬಾಧಿತವಾದಂತಿದೆ. ಗೃಹ ಸಚಿವ ರಾಮಲಿಂಗಾರೆಡ್ಡಿ ಇಂದು ಮಾಜಿ ಪ್ರಧಾನಿ, ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ದೇವೇಗೌಡರೊಂದಿಗೆ ನಡೆದ ಮಾತುಕತೆ ಸಫಲವಾದಂತಿದ್ದು, ಮೈತ್ರಿ ಮುಂದುವರೆಯಲಿದೆ.ಕಾಂಗ್ರೆಸ್-ಜೆಡಿಎಸ್ ಮೈತ್ರಿ ಮುಂದುವರೆದರೆ ಕಾಂಗ್ರೆಸ್‌ಗೆ ಮೇಯರ್, ಜೆಡಿಎಸ್‌ಗೆ ಉಪಮೇಯರ್ ಪಟ್ಟ ದಕ್ಕುತ್ತದೆ. ಪರಿಶಿಷ್ಟ ವರ್ಗಕ್ಕೆ ಮೇಯರ್ ಸ್ಥಾನ ಮೀಸಲಾಗಿರುವ ಹಿನ್ನೆಲೆಯಲ್ಲಿ ದೇವರ ಜೀವನಹಳ್ಳಿ ವಾರ್ಡ್‌ನ ಕಾಂಗ್ರೆಸ್ ಸದಸ್ಯ ಆರ್. ಸಂಪತ್‌ರಾಜ್ ಅಥವಾ ಸುಭಾಷ್‌ನಗರ ವಾರ್ಡ್‌ನ ಗೋವಿಂದರಾಜ್ ಇಬ್ಬರಲ್ಲಿ ಒಬ್ಬರಿಗೆ ಮೇಯರ್ ಸ್ಥಾನ ಸಿಗುವ ಸಾಧ್ಯತೆ ಇದೆ.

ಅದೇ ರೀತಿ ಉಪಮೇಯರ್ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಾಗಿದ್ದು, ಹಾಲಿ ಲೆಕ್ಕಪತ್ರ ಸ್ಥಾಯಿ ಸಮಿತಿ ಅಧ್ಯಕ್ಷರಾಗಿರುವ ನೇತ್ರಾ ನಾರಾಯಣ್ ಅವರಿಗೆ ಒಲಿಯುವ ಸಾಧ್ಯತೆ ಇದೆ. ಈವರೆಗೆ ಕಾಂಗ್ರೆಸ್-ಜೆಡಿಎಸ್ ಮೈತ್ರಿಯಲ್ಲಿ ಬಿರುಕು ಮೂಡಿತ್ತು. ಆಶ್ವಾಸನೆಗಳನ್ನು ಈಡೇರಿಸುವಲ್ಲಿ ಕಾಂಗ್ರೆಸ್ ವಿಫಲವಾಗಿದ್ದು, ಸ್ಥಾಯಿ ಸಮಿತಿಗಳ ಅಧಿಕಾರವನ್ನು ಮೊಟಕುಗೊಳಿಸಿದ ಆರೋಪ ಬಲವಾಗಿ ಕೇಳಿ ಬಂದಿತ್ತು.

ಈ ಹಿನ್ನೆಲೆಯಲ್ಲಿ ಮೈತ್ರಿಯ ಅಗತ್ಯತೆ ಏನಿದೆ ಎಂದು ಜೆಡಿಎಸ್ ಪ್ರಶ್ನಿಸಿತ್ತು. ಅಲ್ಲದೆ ಇತ್ತೀಚೆಗೆ ಜೆಡಿಎಸ್ ರಾಜ್ಯಾಧ್ಯಕ್ಷ ಕುಮಾರಸ್ವಾಮಿ ಜತೆ ಜೆಡಿಎಸ್ ಸದಸ್ಯರು ಸಭೆ ನಡೆಸಿ ಕಾಂಗ್ರೆಸ್‌ನೊಂದಿಗೆ ಮೈತ್ರಿ ಕಡಿದುಕೊಳ್ಳುವ ಮಾತನ್ನಾಡಿದ್ದರು. ಈ ನಡುವೆ ಮೇಯರ್ ಚುನಾವಣೆ ದಿನಾಂಕ ನಿಗದಿಯಾಗಿತ್ತು. ಜೆಡಿಎಸ್‌ನ ಬೆಳವಣಿಗೆಗಳಿಂದ ಎಚ್ಚೆತ್ತ ಕಾಂಗ್ರೆಸ್ ಮುಖಂಡರು ಕೂಡಲೇ ಪಕ್ಷದ ಮುಖಂಡರೊಂದಿಗೆ ಮಾತುಕತೆ ಮುಂದಾದರು. ಬೆಂಗಳೂರು ನಗರದ ನಾಯಕರ ನಾಡಿಮಿಡಿತವನ್ನು ಅರಿತಿರುವ ರಾಮಲಿಂಗಾರೆಡ್ಡಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಜವಾಬ್ದಾರಿ ವಹಿಸಿದ ಹಿನ್ನೆಲೆಯಲ್ಲಿ ರಾಮಲಿಂಗಾರೆಡ್ಡಿಯವರು ಇಂದು ಕೆಪಿಸಿಸಿ ಖಜಾಂಚಿ ಕೃಷ್ಣರಾಜುರೆಡ್ಡಿ ಅವರೊಂದಿಗೆ ದೇವೇಗೌಡರ ನಿವಾಸಕ್ಕೆ ತೆರಳಿ ಮಾತುಕತೆ ನಡೆಸಿದ್ದಾರೆ.

ಈ ಸಂದರ್ಭದಲ್ಲಿ ಬೆಂಬಲಕ್ಕೆ ಗೌಡರು ಒಪ್ಪಿಗೆ ಸೂಚಿಸಿದ್ದಾರೆ ಎಂದು ತಿಳಿದುಬಂದಿದೆ.

14 ಸದಸ್ಯ ಬಲವಿರುವ ಜೆಡಿಎಸ್‌ಗೆ ಉಪಮೇಯರ್ ಪಟ್ಟ ಹಾಗೂ ಮೂರು ಸ್ಥಾಯಿ ಸಮಿತಿ ನೀಡಲಾಗಿತ್ತು. ಈ ಬಾರಿ ಸ್ಥಾಯಿ ಸಮಿತಿ ಒಂದು ಅಧ್ಯಕ್ಷ ಸ್ಥಾನವನ್ನು ಹೆಚ್ಚಿಗೆ ನೀಡಬೇಕೆಂಬ ಬೇಡಿಕೆ ಕೇಳಿಬಂದಿದೆ. ಇದಕ್ಕೆ ಕಾಂಗ್ರೆಸ್ ಸಹಮತ ವ್ಯಕ್ತಪಡಿಸಿದೆ ಎನ್ನಲಾಗಿದೆ. ಇದಲ್ಲದೆ ಮೈಸೂರು ಮಹಾನಗರ ಪಾಲಿಕೆಯ ಮೀಸಲಾತಿ ಬದಲಾವಣೆ ಮಾಡಿಕೊಡಬೇಕೆಂಬ ಬೇಡಿಕೆಯನ್ನೂ ಸರ್ಕಾರದ ಮುಂದಿಟ್ಟಿದ್ದಾರೆ. ಇದನ್ನು ಪರಿಗಣಿಸುವುದಾಗಿ ಜೆಡಿಎಸ್‌ನವರಿಗೆ ಆಶ್ವಾಸನೆ ನೀಡಲಾಗಿದೆ.

ಹೀಗಾಗಿ ಜೆಡಿಎಸ್-ಕಾಂಗ್ರೆಸ್ ಮೈತ್ರಿ ಬಿಬಿಎಂಪಿಯಲ್ಲಿ ಮುಂದುವರೆಯುವ ಎಲ್ಲಾ ಲಕ್ಷಣಗಳು ಗೋಚರಿಸುತ್ತಿವೆ. ಅನುದಾನ ತಾರತಮ್ಯ ಮಾಡದಂತೆ ಆರಂಭದಲ್ಲಿ ನೀಡಿದ ಆಶ್ವಾಸನೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮೈತ್ರಿ ಮುಂದುವರೆಸಲು ಅನುಮತಿಯನ್ನು ವರಿಷ್ಠರು ನೀಡಿದ್ದಾರೆ ಎನ್ನಲಾಗಿದೆ.

ಗೆದ್ದೇ ಗೆಲ್ಲುತ್ತೇವೆ ಕಾದುನೋಡಿ:

ಇತ್ತ ಜೆಡಿಎಸ್-ಕಾಂಗ್ರೆಸ್ ಮೈತ್ರಿ ಮುಂದುವರೆಯುವ ಸ್ಪಷ್ಟ ಲಕ್ಷಣಗಳು ಕಂಡು ಬರುತ್ತಿರುವ ಬೆನ್ನಲ್ಲೇ ಅತ್ತ ಬಿಜೆಪಿಯವರು ನಾವೇ ಈ ಬಾರಿ ಬಿಬಿಎಂಪಿಯುಲ್ಲಿ ಅಧಿಕಾರ ಗದ್ದುಗೆಗೇರುವುದು ಕಾದು ನೋಡಿ ಎಂದು ಹೇಳುತ್ತಿದ್ದಾರೆ. 101 ಸದಸ್ಯ ಬಲವಿರುವ ನಮಗೆ ಯಾರ ಬೆಂಬಲ ಬೇಕಾಗಿಲ್ಲ. ನಾವು ಗೆದ್ದೇ ಗೆಲ್ಲುತ್ತೇವೆ ಈ ವಿಶ್ವಾಸ ನಮಗಿದೆ ಎಂದು ಪ್ರತಿಪಕ್ಷದ ನಾಯಕ ಪದ್ಮನಾಭರೆಡ್ಡಿ ತಿಳಿಸಿದ್ದಾರೆ. ವಿಳಾಸ ಬದಲಾವಣೆ ಮತ್ತು ಪ್ರಯಾಣ ಭತ್ಯೆ ದುರ್ಬಳಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎಂಟು ವಿಧಾನಪರಿಷತ್ ಸದಸ್ಯರ ಮೇಲೆ ದೂರಿದೆ.